# ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯ, ವಿಜಯಪುರ

**ದಿನಾಂಕ: 02–09–2018**

**ಪ್ರಕಟಣೆಯ ಕೃಪೆಗಾಗಿ..........**

**ವಿಜಯಪುರ:** ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದ ಯುವ ರೆಡ್ ಕ್ರಾಸ್ ಘಟಕದ ವತಿಯಿಂದ ಪುನಶ್ಚೇತನ ಹಾಗೂ ಯೋಜನೆ ಕುರಿತ ಒಂದು ದಿನದ ಕಾರ್ಯಾಗಾರವನ್ನು ಸೋಮವಾರ ಬೆಳಿಗ್ಗೆ 10.30ಕ್ಕೆ ಹಮ್ಮಿಕೊಳ್ಳಲಾಗಿದೆ.

ಮಹಿಳಾ ವಿವಿ ಜ್ಞಾನಶಕ್ತಿ ಆವರಣದ ಡಾ.ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಆಯೋಜಿಸಿರುವ ಈ ಕಾರ್ಯಾಗಾರವನ್ನು ಬೆಂಗಳೂರಿನ ಭಾರತೀಯ ರೆಡ್ ಕ್ರಾಸ್ ಸಂಸ್ಥೆಯ ಸಲಹೆಗಾರ ಡಾ.ಎಚ್.ಎಸ್.ಸುರೇಶ ಉದ್ಘಾಟಿಸುವರು. ಮಹಿಳಾ ವಿವಿ ಕುಲಪತಿ ಪ್ರೊ.ಸಬಿಹಾ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಮಹಿಳಾ ವಿವಿ ಕುಲಸಚಿವ ಪ್ರೊ.ಎಲ್.ಆರ್.ನಾಯಕ ಮತ್ತು ಬೆಂಗಳೂರಿನ ಭಾರತೀಯ ರೆಡ್ ಕ್ರಾಸ್ ಸಂಸ್ಥೆ ಕಾರ್ಯಕ್ರಮ ಸಂಯೋಜಕ ಡಾ.ಶಕೀಬ ಆಗಮಿಸುವರು. ಸಮಾಜ ಕಾರ್ಯ ವಿಭಾಗದ ಮುಖ್ಯಸ್ಥ ಪ್ರೊ.ಎಸ್.ಎ.ಖಾಜಿ ಉಪಸ್ಥಿತರಿರುವರು.

ಕಾರ್ಯಾಗಾರದಲ್ಲಿ 34 ಅನುದಾನಿತ ಕಾಲೇಜುಗಳ ಕಾರ್ಯಕ್ರಮದ ಸಂಯೋಜನಾಧಿಕಾರಿಗಳು ಹಾಗೂ ಸಮಾಜಕಾರ್ಯ ವಿಭಾಗದ ಸಂಶೋಧನಾ ವಿದ್ಯಾರ್ಥಿನಿಯರು ಮತ್ತು ವಿದ್ಯಾರ್ಥಿಗಳು ಭಾಗವಹಿಸುವರು.

ಈ ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ಯುಥ್ ರೆಡ ಕ್ರಾಸ್ ಘಟಕದ ನೋಡಲ್ ಅಧಿಕಾರಿ ಡಾ.ರಮೇಶ ಸೋನಕಾಂಬಳೆ ಈ ಮೂಲಕ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.